**All India Radio: Bangalore**
**Regional Bulletin In Kannada**
**25.08.2026 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ರಾಜ್ಯದ ಬರಪೀಡಿತ ಪ್ರದೇಶಗಳಲ್ಲಿ ಬೆಳೆ ವಿಮೆ ನೋಂದಣಿ ಅವಧಿ ವಿಸ್ತರಿಸಿ ಕೇಂದ್ರ ಸರ್ಕಾರ ಆದೇಶ
2. ಇಪ್ಪತ್ತೇಳು ಕೋಟಿ ರೂಪಾಯಿ ವೆಚ್ಚದಲ್ಲಿ ೬೦ ದಿನಗಳ ಕಾಲ ಮೋಡ ಬಿತ್ತನೆಗೆ ಸರ್ಕಾರ ನಿರ್ಧಾರ
3. ಜಿಲ್ಲೆಗಳ ಸಮಗ್ರ ಅಭಿವೃದ್ಧಿಗೆ ಸಚಿವರು, ಶಾಸಕರ ಜೊತೆ ಮುಖ್ಯಮಂತ್ರಿ ಸಮಾಲೋಚನಾ ಸಭೆ
4. ತುಮಕೂರಿನಲ್ಲಿ ಗ್ರೀನ್ ಡೇಟಾ ಸೆಂಟರ್: ಖಾಸಗಿ ಸಂಸ್ಥೆಯೊಂದಿಗೆ ಸಚಿವ ಪ್ರಿಯಾಂಕ್ ಖರ್ಗೆ ಚರ್ಚೆ
5. ತಮಿಳುನಾಡಿಗೆ ನಿತ್ಯ ೯ ಸಾವಿರ ಕ್ಯೂಸೆಕ್ ಕಾವೇರಿ ನೀರು ಹರಿಸುವ ಸಿಡಬ್ಲ್ಯುಆರ್‌ಸಿ ಶಿಫಾರಸ್ಸು ಎತ್ತಿಹಿಡಿದ ಸಿಡಬ್ಲುಎಂಎ

<><><>

ರಾಜ್ಯದ ಬರಪೀಡಿತ ಪ್ರದೇಶಗಳಲ್ಲಿ ಬೆಳೆವಿಮೆ ನೋಂದಣಿ ಅವಧಿ ವಿಸ್ತರಿಸಿ ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ. ಅವಧಿ ವಿಸ್ತರಣೆ ಕೋರಿ, ರಾಜ್ಯ ಸರ್ಕಾರ ಕೇಂದ್ರಕ್ಕೆ ಪತ್ರ ಬರೆದು ಮನವಿ ಮಾಡಿತ್ತು. ರೈತರ ಹಿತದೃಷ್ಟಿಯಿಂದ ವಿಮೆ ನೋಂದಣಿ ಅವಧಿಯನ್ನು ವಿಸ್ತರಿಸಲು ಕೇಂದ್ರ ಸರ್ಕಾರ ಒಪ್ಪಿಗೆ ನೀಡಿದೆ. ಅಕಾಲಿಕ ಮಳೆ, ಹವಾಮಾನ ವೈಪರಿತ್ಯ ಮತ್ತು ತಾಂತ್ರಿಕ ಕಾರಣಗಳಿಂದಾಗಿ ವಿಮೆ ನೋಂದಣಿ ಪ್ರಕ್ರಿಯೆಯಲ್ಲಿ ಉಂಟಾದ ವಿಳಂಬ ಗಮನಿಸಿ, ಕೇಂದ್ರ ಕೃಷಿ ಸಚಿವಾಲಯ ನೋಂದಣಿ ಹಾಗೂ ಪ್ರೀಮಿಯಂ ಕಡಿತದ ಅವಧಿಯನ್ನು ಇದೇ ೩೧ರವರೆಗೆ ವಿಸ್ತರಸಿ, ಆದೇಶ ಹೊರಡಿಸಿದೆ. ಈ ನಿರ್ಧಾರದಿಂದಾಗಿ ನೂರಾರು ರೈತರು ವಿಮೆಯ ಸುರಕ್ಷಾ ಕವಚದಿಂದ ವಂಚಿತರಾಗುವುದು ತಪ್ಪಿದೆ.

<><><>

ರಾಜ್ಯದಲ್ಲಿ ಎದುರಾಗಿರುವ ಮಳೆ ಕೊರತೆ ನೀಗಿಸುವ ನಿಟ್ಟಿನಲ್ಲಿ ಮೋಡ ಬಿತ್ತನೆ ಕಾರ್ಯಕ್ಕೆ ವೇಗ ನೀಡಲಾಗಿದ್ದು, ಮೂರು ಸಮಿತಿಗಳನ್ನು ರಚಿಸಲಾಗುವುದು ಎಂದು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಂಬಂಧ ಇಲಾಖೆ ಕಾರ್ಯದರ್ಶಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ. ಮೇಲ್ವಿಚಾರಣಾ ಸಮಿತಿ, ತಾಂತ್ರಿಕ ಸಮಿತಿ, ಕಾರ್ಯಾಚರಣೆ ಮತ್ತು ಮೌಲ್ಯಮಾಪನ ಸಮಿತಿ ರಚಿಸಿ, ಇನ್ನೆರಡು ದಿನಗಳಲ್ಲಿ ಮೋಡ ಬತ್ತನೆ ಕಾರ್ಯಾಕ್ಕೆ ಚಾಲನೆ ನೀಡಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದ್ದಾರೆ. ಅಂದಾಜು ೨೭ ಕೋಟಿ ರೂಪಾಯಿ ವೆಚ್ಚದಲ್ಲಿ ೬೦ ದಿನಗಳ ಕಾಲ ಮೋಡ ಬಿತ್ತನೆ ನಡೆಯಲಿದೆ. ಸರ್ಕಾರಕ್ಕೆ ಆರ್ಥಿಕ ಹೊರೆಯಾದರೂ ಜನ-ಜಾನುವಾರುಗಳಿಗೆ ನೀರು ಒದಗಿಸುವುದು ಆದ್ಯತೆಯಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

<><><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹಕಚೇರಿ 'ಕೃಷ್ಣಾ'ದಲ್ಲಿ ಇಂದು ವಿವಿಧ ಜಿಲ್ಲೆಗಳ ಸಮಗ್ರ ಅಭಿವೃದ್ಧಿ ಕಾರ್ಯಕ್ರಮ ಕುರಿತು ಆಯಾ ಜಿಲ್ಲೆಗಳ ಸಚಿವರು, ಕಾಂಗ್ರೆಸ್ ಶಾಸಕರ ಜತೆ ಪ್ರತ್ಯೇಕವಾಗಿ ಸಮಾಲೋಚನೆ ಸಭೆ ನಡೆಸಿದರು. ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಚಿವರಾದ ಎಚ್.ಕೆ.ಪಾಟೀಲ್, ಈಶ್ವರ್ ಖಂಡ್ರೆ, ಪ್ರಿಯಾಂಕ್ ಖರ್ಗೆ, ಶಿವರಾಜ್ ತಂಗಡಗಿ ಮತ್ತಿತರರು ಭಾಗವಹಿಸಿದ್ದರು. ನಾಳೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲೆಗಳ ಸಮಗ್ರ ಅಭಿವೃದ್ಧಿ ಕುರಿತಂತೆ ಶಾಸಕರೊಂದಿಗೆ ಚರ್ಚೆ ನಡೆಸಲಿದ್ದಾರೆ.

<><><>

ತುಮಕೂರಿನಲ್ಲಿ ಸಂಯೋಜಿತ 'ಗ್ರೀನ್ ಡೇಟಾ ಸೆಂಟರ್' ಸ್ಥಾಪಿಸುವ ಪ್ರಸ್ತಾವನೆ ಕುರಿತು ಲಕ್ಸೆಂಬರ್ಗ್ ಮೂಲದ 'ಇನ್ನೋವೇಶನ್ ಪ್ಲಾಟ್‌ಫಾರ್ಮ್ ಕ್ಯಾಪಿಟಲ್' ಸಂಸ್ಥೆಯ ಪ್ರತಿನಿಧಿಗಳೊಂದಿಗೆ ಗೃಹ, ಮಾಹಿತಿ ತಂತ್ರಜ್ಞಾನ, ಸಚಿವ ಪ್ರಿಯಾಂಕ್ ಖರ್ಗೆ ಇಂದು ಚರ್ಚೆ ನಡೆಸಿದರು. ರಾಜ್ಯದಲ್ಲಿ ಡಿಜಿಟಲ್ ಮೂಲಸೌಕರ್ಯ ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಹೆಚ್ಚುವರಿಯಾಗಿ ೧ ಗಿಗಾವ್ಯಾಟ್ ಡೇಟಾ ಸೆಂಟರ್ ಸಾಮರ್ಥ್ಯವನ್ನು ಅಭಿವೃದ್ಧಿಪಡಿಸುವ ಗುರಿ ಹೊಂದಿದೆ. ಇಂಧನ ದಕ್ಷತೆ, ನೀರಿನ ಸಮರ್ಥ ಬಳಕೆ ಮತ್ತು ಪರಿಸರ ಸ್ನೇಹಿ ಕಾರ್ಯಾಚರಣೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಾಚೆಗೂ ಕರ್ನಾಟಕದ ಡೇಟಾ ಸೆಂಟರ್ ವಲಯವನ್ನು ವಿಸ್ತರಿಸುವುದು ಹಾಗೂ ಹೆಚ್ಚು ಸುಸ್ಥಿರ ಡಿಜಿಟಲ್ ಮೂಲಸೌಕರ್ಯವನ್ನು ನಿರ್ಮಿಸುವುದು ಸರ್ಕಾರದ ಯೋಜನೆಯ ಭಾಗವಾಗಿದೆ ಎಂದು ಹೇಳಿದ್ದಾರೆ.

<><><>

ರಾಜ್ಯದಲ್ಲಿ ಸೆಮಿಕಂಡಕ್ಟರ್ ಇಕೋಸಿಸ್ಟಂ ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಅಪ್ಲೈಡ್ ಮೆಟೀರಿಯಲ್ಸ್ ಸಂಸ್ಥೆ ಹೂಡಿಕೆ ಮಾಡಲು ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಸಂಸ್ಥೆಯ ಕಾರ್ಪೊರೇಟ್ ಉಪಾಧ್ಯಕ್ಷ ಹಾಗೂ ಮುಖ್ಯ ಜಾಗತಿಕ ನೀತಿ ಅಧಿಕಾರಿ ರಾಬರ್ಟ್ ಬ್ಲೇರ್ ಹಾಗೂ ಭಾರತದ ನಾಯಕತ್ವ ತಂಡವನ್ನು ಸಚಿವ ಪ್ರಿಯಾಂಕ್ ಖರ್ಗೆ ಭೇಟಿ ಮಾಡಿ ಚರ್ಚೆ ನಡೆಸಿದರು. ಬೆಂಗಳೂರಿನಲ್ಲಿ ಸಂಸ್ಥೆ ಕೈಗೊಳ್ಳಲಿರುವ ಮುಂಬರುವ ಹೂಡಿಕೆ ಹಾಗೂ ಸೆಮಿಕಂಡಕ್ಟರ್ ಇಕೋಸಿಸ್ಟಂ ಅಭಿವೃದ್ಧಿ ಕುರಿತು ಸಮಾಲೋಚನೆ ನಡೆಸಿದರು. ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಕರ್ನಾಟಕ ಈಗಾಗಲೇ ಹೊಂದಿರುವ ಸಾಮರ್ಥ್ಯವನ್ನು ಮತ್ತಷ್ಟು ಹೆಚ್ಚಿಸುವುದು, ಸಂಶೋಧನೆ ಮತ್ತು ಅಭಿವೃದ್ಧಿಗೆ ಉತ್ತೇಜನ ನೀಡುವುದು ಹಾಗೂ ಬಲಿಷ್ಠ ಸೆಮಿಕಂಡಕ್ಟರ್ ಇಕೋಸಿಸ್ಟಂ ನಿರ್ಮಿಸುವುದು ರಾಜ್ಯ ಸರ್ಕಾರದ ಪ್ರಮುಖ ಆದ್ಯತೆಗಳಲ್ಲಿ ಒಂದಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

<><><>

ತಮಿಳುನಾಡಿಗೆ ಕಾವೇರಿ ನೀರು ಹರಿಸುವ ವಿಚಾರದಲ್ಲಿ ಕಾವೇರಿ ನೀರು ನಿಯಂತ್ರಣ ಸಮಿತಿಯ ಶಿಫಾರಸನ್ನು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಎತ್ತಿಹಿಡಿದಿದೆ. ಮುಂದಿನ ೧೫ ದಿನಗಳ ಕಾಲ ತಮಿಳುನಾಡಿಗೆ ಪ್ರತಿದಿನ ೯ ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ರಾಜ್ಯ ಸರ್ಕಾರಕ್ಕೆ ಪ್ರಾಧಿಕಾರ ಸೂಚನೆ ನೀಡಿದೆ. ದೆಹಲಿಯ ಸಿಡಬ್ಲ್ಯೂಎಂಎ ಕಚೇರಿಯಲ್ಲಿ ಇಂದು ನಡೆದ ಸಭೆಯಲ್ಲಿ ರಾಜ್ಯದ ಪರವಾಗಿ ಜಲಸಂಪನ್ಮೂಲ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಹಾಗೂ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಭಾಗವಹಿಸಿದ್ದರು. ಈ ಕುರಿತಂತೆ ಪ್ರತಿಕ್ರಿಯಿಸಿರುವ ಜೆಡಿಎಸ್, ರಾಜ್ಯ ಸರ್ಕಾರಕ್ಕೆ ರೈತರ ಹಿತಾಸಕ್ತಿ ಕಾಪಾಡುವ ಬಗ್ಗೆ ಕಾಳಜಿಯೇ ಇಲ್ಲ ಎಂದು ದೂರಿದೆ.

<><><>

ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ, ಹಗಲು-ರಾತ್ರಿ ಧರಣಿ ನಡೆಸುವುದಾಗಿ ಘೋಷಣೆ ಮಾಡಿದ ಕೂಡಲೇ ಸರ್ಕಾರ ಸದನದ ಕಲಾಪವನ್ನು ಅನಿರ್ದಿಷ್ಟಾವಧಿಗೆ ಮುಂದೂಡಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉದ್ಯಾನಗಳಲ್ಲಿ ಭೂಮಿ ಕಬಳಿಕೆ ಸೇರಿದಂತೆ ಚರ್ಚೆ ಇಲ್ಲದೆ ಮಂಡಿಸಿದ ಮಸೂದೆಗಳನ್ನು ವಾಪಸ್ ಪಡೆಯುವಂತೆ ಆಗ್ರಹಿಸಿದ್ದಾರೆ.

<><><>

ಮೈಸೂರಿನಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಬುಡಕಟ್ಟು ಭಾಷೆಗಳು ಮತ್ತು ವಸ್ತುಸಂಗ್ರಹಾಲಯಗಳ ವಿಚಾರ ಸಂಕಿರಣದ ಎರಡನೇ ದಿನವಾದ ಇಂದು ಬುಡಕಟ್ಟು ಸಮುದಾಯಗಳ ಭಾಷೆಗಳನ್ನು ಹಾಡು, ವಿಡಿಯೋ ಹಾಗೂ ಸಾಂಸ್ಕೃತಿಕ ಪರಂಪರೆಯ ಮೂಲಕ ದಾಖಲಿಸಿ ಸಂರಕ್ಷಿಸುವುದು, ಸಮುದಾಯ ರೇಡಿಯೋ ಸೇರಿದಂತೆ ವಿವಿಧ ಮಾಧ್ಯಮಗಳ ಮೂಲಕ ಅವುಗಳ ಬಳಕೆಯನ್ನು ಹೆಚ್ಚಿಸುವ ಕುರಿತು ಚರ್ಚಿಸಲಾಗಿದೆ. ಬಳಿಕ ಮಾತನಾಡಿದ ಕರ್ನಾಟಕ ಬುಡಕಟ್ಟು ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ.ಅಶೋಕ್, ಬುಡಕಟ್ಟು ಭಾಷೆಗಳು ಮತ್ತು ಸಂಸ್ಕೃತಿಯ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯವಿದೆ ಎಂದು ತಿಳಿಸಿದ್ದಾರೆ. ಬುಡಕಟ್ಟು ವಸ್ತು ಸಂಗ್ರಹಾಲಯಗಳು ಕೇವಲ ಕಟ್ಟಡಗಳಾಗದೆ, ಜೀವಂತ ಸಾಂಸ್ಕೃತಿಕ ಕೇಂದ್ರಗಳಾಗಿ ರೂಪುಗೊಳ್ಳಬೇಕು. ಬುಡಕಟ್ಟು ಜನರ ಜೀವನಶೈಲಿ, ಆಹಾರ ಪದ್ಧತಿ, ಸಾಂಪ್ರದಾಯಿಕ ವೈದ್ಯಕೀಯ ಜ್ಞಾನ, ಕಲೆ ಮತ್ತು ಕರಕುಶಲ

ವಸ್ತುಗಳನ್ನು ಸಂರಕ್ಷಿಸಬೇಕು ಎಂದು ಹೇಳಿದ್ದಾರೆ. ೨೬ ರಾಜ್ಯಗಳ ಸುಮಾರು ೧೦೦ ಮಂದಿ ಪ್ರತಿನಿಧಿಗಳು ಸಮಾವೇಶದಲ್ಲಿ ಭಾಗವಹಿಸಿದ್ದಾರೆ.

<><><><>

ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವದಲ್ಲಿ ೬ ಬಾರಿ ಚಿನ್ನದ ಅಂಬಾರಿ ಹೊತ್ತು ಯಶಸ್ವಿಯಾಗಿ ತನ್ನ ಜವಾಬ್ದಾರಿ ನಿರ್ವಹಿಸಿ ನಿವೃತ್ತಿಯಾಗುತ್ತಿರುವ ಕ್ಯಾಪ್ಟನ್ ಅಭಿಮನ್ಯುವಿಗೆ ನಾಳೆ ನಡೆಯಲಿರುವ ಗಜಪಯಣ ಕಾರ್ಯಕ್ರಮದಲ್ಲಿ ಗೌರವಪೂರ್ವಕ ಬೀಳ್ಕೊಡುಗೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಅರಣ್ಯ ಇಲಾಖೆ ತಿಳಿಸಿದೆ. ಈ ವರ್ಷದ ಗಜಪಯಣವು ಮೈಸೂರು ದಸರಾ ಇತಿಹಾಸದಲ್ಲಿ ಅಭಿಮನ್ಯುವಿಗೆ ವಿಶೇಷ ಹಾಗೂ ಭಾವಪೂರ್ಣ ಗೌರವ ಸಲ್ಲಿಸುವ ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದೆ. ಅಭಿಮನ್ಯು ಆನೆ ಸಕ್ರಿಯ ದಸರಾ ಕರ್ತವ್ಯಗಳಿಂದ ನಿವೃತ್ತಿಯಾಗುತ್ತಿದ್ದರೂ, ಅದರ ಪರಂಪರೆ ಹಾಗೂ ಸೇವೆ ಸದಾ ಜೀವಂತವಾಗಿರಲಿದೆ.

<><><><>

ಕಠಿಣ ಶ್ರಮ ಹಾಗೂ ತಾಂತ್ರಿಕ ಸಂಶೋಧನೆಗಳ ಮೂಲಕ ಭಾರತ ರೇಷ್ಮೆ ಉತ್ಪಾದನೆಯಲ್ಲಿ ಪ್ರಥಮ ಸ್ಥಾನಕ್ಕೇರುವಂತೆ ರೈತರು ಹಾಗೂ ವಿಜ್ಞಾನಿಗಳು ಶ್ರಮಿಸಬೇಕು ಎಂದು ಸಂಸದ ಗೋವಿಂದ ಎಂ. ಕಾರಜೋಳ ಕರೆ ನೀಡಿದ್ದಾರೆ. ಚಿತ್ರದುರ್ಗದಲ್ಲಿ ಹಮ್ಮಿಕೊಳ್ಳಲಾಗಿದ್ದ 'ನನ್ನ ರೇಷ್ಮೆ ನನ್ನ ಹೆಮ್ಮೆ' ಅಭಿಯಾನದಡಿ ರೈತರು ಮತ್ತು ವಿಜ್ಞಾನಿಗಳ ನಡುವಿನ ಸಂವಾದ ಹಾಗೂ ವಿಚಾರ ವಿನಿಮಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಚಿತ್ರದುರ್ಗದ ಈ ಪ್ರಾದೇಶಿಕ ರೇಷ್ಮೆ ಸಂಶೋಧನಾ ಕೇಂದ್ರವು ೧೦ ಉಪ-ಘಟಕಗಳ ತಾಂತ್ರಿಕ ಚಟುವಟಿಕೆಗಳನ್ನು ಮತ್ತು ಉತ್ತರ ಕರ್ನಾಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ೩ ಘಟಕಗಳನ್ನು ಸಮನ್ವಯಗೊಳಿಸಲಿದೆ ಎಂದು ತಿಳಿಸಿದ್ದಾರೆ.

<><><><>

ಇನ್ನು ಸಂಕ್ಷಿಪ್ತ ಸುದ್ದಿಗಳು..

1. ಮೈಸೂರಿನ ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕರಡು ಮತದಾರರ ಪಟ್ಟಿಯನ್ನು ಇಖಔ ಕಚೇರಿಯಲ್ಲಿ ಪ್ರಕಟಿಸಲಾಗಿದೆ.
2. ಜನನದ ನಂತರದ ಮೊದಲ ೧೦ ದಿನಗಳಲ್ಲಿ ತಾಯಿ ನೀಡುವ ಎದೆಹಾಲು ಮಗುವಿಗೆ ಅಗತ್ಯವಾದ ಪೋಷಕಾಂಶ ಒದಗಿಸುವುದರ ಜೊತೆಗೆ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಕಾರಿಯಾಗಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ವಿಜಯಪುರದಲ್ಲಿ ತಿಳಿಸಿದ್ದಾರೆ.
3. ಈದ್ ಮಿಲಾದ್ ಹಿನ್ನೆಲೆಯಲ್ಲಿ ನಾಳೆ ಚಿಕ್ಕಮಗಳೂರಿನ ಸಂತೆಯನ್ನು ರದ್ದುಮಾಡಲಾಗಿದೆ ಶಾಂತಿಯುತವಾಗಿ ಹಬ್ಬ ಆಚರಣೆಗೆ ಜಿಲ್ಲಾಡಳಿತ ಸೂಚನೆ ನೀಡಿದೆ.
4. ಕೋಲಾರ ನಗರದಲ್ಲಿ ಈದ್ ಮಿಲಾದ್ ಹಬ್ಬವನ್ನು ಶಾಂತಿ, ಸೌಹಾರ್ದತೆಯಿಂದ ಆಚರಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್ ನಿರ್ದೇಶನ ನೀಡಿದ್ದಾರೆ.
5. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆಗೆ ಸಂಬಂಧಿಸಿದಂತೆ ಕರಡು ಮತದಾರ ಪಟ್ಟಿ ಪ್ರಕಟವಾಗಿದ್ದು ಜಿಲ್ಲೆಯಲ್ಲಿ ೭ಲಕ್ಷದ೯೬ಸಾವಿರದ೧೩೮ ಮತದಾರರು ಕರಡು ಮತದಾರರ ಪಟ್ಟಿಯಲ್ಲಿದ್ದಾರೆ.
6. ಖಾಲಿ ನಿವೇಶನಗಳ ಸ್ವಚ್ಛತೆಯನ್ನು ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡದಿರುವ ಮಾಲೀಕರಿಗೆ ತಕ್ಷಣವೇ ನೋಟಿಸ್ ಜಾರಿಗೊಳಿಸುವಂತೆ ಅಧಿಕಾರಿಗಳಿಗೆ ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ. ಎನ್. ರಮೇಶ್ ಸೂಚನೆ ನೀಡಿದ್ದಾರೆ.
7. ತುಮಕೂರಿನ ಹೊನ್ನುಡಿಕೆ ಮತ್ತು ಮಸ್ಕಲ್ ಗ್ರಾಮ ಪಂಚಾಯಿತಿಗಳಲ್ಲಿ ವಿಬಿ ಜಿ ರಾಮ್ ಜಿ ಯೋಜನೆಯಡಿ ಜಾಬ್ ಕಾರ್ಡ್ ಮೇಳ ಹಾಗೂ ಗ್ರಾಮೀಣ ರೋಜ್ಗಾರ್ ಗ್ಯಾರಂಟಿ ಕಾರ್ಡ್ ವಿತರಣೆ ಅಭಿಯಾನಕ್ಕೆ ಸಹಾಯಕ ನಿರ್ದೇಶಕ ಎಸ್.ಎಸ್. ಮಂಜುನಾಥ್ ಚಾಲನೆ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>